ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಗುರುವಾರ, ದಿನಾಂಕ : 24 ನೇ ಸೆಪ್ಟೆಂಬರ್, 2020

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಲ್ಲಿ ಬದಲಿ ನಿವೇಶನ ಹಂಚಿಕೆಯಲ್ಲಿನ ಸಮಸ್ಯೆ ಬಗ್ಗೆ

ಶ್ರೀ ಅಡಗೂರ್ ಹೆಚ್. ವಿಶ್ವನಾಥ್(ನಾಮ ನಿರ್ದೇಶನ ಹೊಂದಿದವರು) -

430 (581) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಸಾರ್ವಜನಿಕರಿಂದ ನಿವೇಶನ/ ಜಮೀನುಗಳನ್ನು ವಶಪಡಿಸಿಕೊಂಡು ಸಂಬಂಧಿಸಿದವರಿಗೆ ಬದಲಿ ನಿವೇಶನಗಳನ್ನು ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ನಿವೇಶನ/ ಜಮೀನುಗಳ ಸ್ವಾಧೀನದ ಬದಲಿಗೆ ಬದಲಿ ನಿವೇಶನ ಕೋರಿ ಅರ್ಜಿ ಸಲ್ಲಿಸಿರುವ ಫಲಾನುಭವಿಗಳ ವಿವರ ನೀಡುವುದು;

(ಇ) ಸಾರ್ವಜನಿಕರ ಜಮೀನು/ ನಿವೇಶನಗಳನ್ನು ಸ್ವಾಧೀನಪಡಿಸಿಕೊಂಡು ಸಂಬಂಧಿಸಿದವರಿಗೆ ಬದಲಿ ನಿವೇಶನ ನೀಡದಿರಲು ಕಾರಣವೇನು;

(ಈ) ಬದಲಿ ನಿವೇಶನಕ್ಕೆ ಅರ್ಹರಾಗಿದ್ದು ಹಂಚಿಕೆಯಾಗದ ಫಲಾನುಭವಿಗಳ ಪಟ್ಟಿ ನೀಡುವುದು?